(ಇ)ಹಾಗಿದ್ದಲ್ಲಿ, ಈವರೆಗೆ ತನಿಖೆಯಿಂದ ಆಗಿರುವ ವರದಿಯನ್ನು ಆಧರಿಸಿ ಸರ್ಕಾರ ಸಂಬಂಧಪಟ್ಟ ಅಧಿಕಾರಿಗಳ ಮೇಲೆ ಯಾವ ಕ್ರಮ ಕೈಗೊಂಡಿದೆ ?

ಡಾ: ವಿ. ಎಸ್. ಆಚಾರ್ಯ (ವೈದ್ಯಕೀಯ ಶಿಕ್ಷಣ ಸಚಿವರು) :-

(ಅ) ರಾಮನಗರದಲ್ಲಿ ಒಂದು ಹೊಸ ವೈದ್ಯಕೀಯ ಕಾಲೇಜನ್ನು ಪ್ರಾರಂಭಿಸುವ ಯೋಜನೆ ಸರ್ಕಾರದಲ್ಲಿ ಇರುತ್ತದೆ. ರಾಮನಗರ ಮತ್ತು ಗುಲ್ಬರ್ಗಗಳಲ್ಲಿ ತಲಾ ಒಂದು ನರ್ಸಿಂಗ್ ಕಾಲೇಜ್ ಪ್ರಾರಂಭಿಸುವ ಯೋಜನೆ ಸರ್ಕಾರದ ಮುಂದಿದೆ ಮತ್ತು ರಾಜ್ಯದ ಯಾವುದೇ ನಗರದಲ್ಲಿ ಡಿ ಫಾರ್ಮ ಕಾಲೇಜನ್ನು ಪ್ರಾರಂಭಿಸುವ ಯೋಜನೆ ಪ್ರಸ್ತುತ ಸರ್ಕಾರದ ಮುಂದಿರುವುದಿಲ್ಲ.

(ಆ) ಹೌದು.

(ಇ) ವಿಚಾರಣಾ ವರದಿಯನ್ನು ನಿರೀಕ್ಷಿಸಲಾಗಿದ್ದು, ಅದು ಬಂದ ಕೂಡಲೇ ಪರಿಶೀಲಿಸಿ ಮುಂದಿನ ಕ್ರಮ ಕೈಗೊಳ್ಳಲಾಗುವುದು.

ಮೀಸಲಾತಿ ಅವಕಾಶವನ್ನು ನ್ಯಾಯ ಸಮ್ಮತವಾಗಿ ದೊರಕಿಸಿಕೊಡುವುದು

681 (1125) ಶ್ರೀ ಸಿಂಧೂರ ಜಿ. ರಾಜಶೇಖರ (ಶಿಗ್ಗಾಂವ್) :- ಸಮಾಜ ಕಲ್ಯಾಣ ಸಚಿವರು ದಯೆಯಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೇ ?

ಅ) ಮೀಸಲಾತಿ ಅವಕಾಶವು ನ್ಯಾಯ ಸಮ್ಮತವಾಗಿ ದೊರೆಯದಿರುವ ರಾಜ್ಯದ ಅನುಸೂಚಿತ ಜಾತಿಗಳ ನಿರ್ದಿಷ್ಟ ಜಾತಿಗಳು, ಜನಾಂಗಗಳು ಹಾಗೂ ಬುಡಕಟ್ಟುಗಳಿಗೆ ಗುರುತಿಸುವುದಕ್ಕಾಗಿ ಈಗಾಗಲೆ ನಿವೃತ್ತ ನ್ಯಾಯಮೂರ್ತಿ ಶ್ರೀ ಎ.ಜೆ. ಸದಾಶಿವ ವಿಚಾರಣಾ ಆಯೋಗವನ್ನು ರಚಿಸಿದ್ದು, ಆಯೋಗವು ನೀಡುವ ವರದಿಯನ್ನು ಪರಿಶೀಲಿಸಿ ಕ್ರಮ ಕೈಗೊಳ್ಳುವುದಾಗಿ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ 167 ದಿನಾಂಕ: 01-02-2007ರಂದು ತಿಳಿಸಿದ್ದು ಈವರೆಗೂ ಕ್ರಮ ಕೈಗೊಳ್ಳದೇ ಇರುವುದು ಸರಕಾರದ ಗಮನದಲ್ಲಿದೆಯೇ ;

ಆ) ಹಾಗಿದ್ದಲ್ಲಿ, ನಿವೃತ್ತ ನ್ಯಾಯಮೂರ್ತಿ ಶ್ರೀ ಎ.ಜೆ. ಸದಾಶಿವ ವಿಚಾರಣಾ ಅಯೋಗದ ವರದಿಯನ್ನು ನೀಡಲು ಎಷ್ಟು ಕಾಲಾವಕಾಶವನ್ನು ನೀಡಲಾಗಿದೆ ಹಾಗೂ ವರದಿ ಬಂದನಂತರ ಎಷ್ಟು ಕಾಲಾವಕಾಶದಲ್ಲಿ ಕ್ರಮ ಕೈಗೊಳ್ಳಲಾಗುವುದು ;

ಇ) ಹಿಂದುಳಿದ ವರ್ಗಗಳಿಗೆ ಸಂಬಂಧಪಟ್ಟಂತೆ ಸರಕಾರವು ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಶಾಶ್ವತ ಆಯೋಗವನ್ನು ರಚಿಸಿದ್ದು, ಪ್ರಸ್ತುತ ಆಯೋಗದ ಅಧ್ಯಕ್ಷರು ಮತ್ತು ಸದಸ್ಯರನ್ನು ನೇಮಕ ಮಾಡುವ ವಿಷಯ ಪರಿಶೀಲನೆಯಲ್ಲಿದ್ದು, ನೇಮಕವಾದ ನಂತರ ರಾಜ್ಯದಲ್ಲಿ ಹಿಂದುಳಿದ ವರ್ಗಗಳ ಮನೆ ಮನೆ ಸಮೀಕ್ಷಾ ಕಾರ್ಯವನ್ನು ನಡೆಸಿ ಆಯೋಗವು ನೀಡುವ ವರದಿಯನ್ವಯ ಮುಂದಿನ ಕ್ರಮ ಕೈಗೊಳ್ಳಲಾಗುವುದು ಎಂದು ಚುಕ್ಕೆ

ಗುರುತಿಲ್ಲದ ಪ್ರಶ್ನೆ ಸಂಖ್ಯೆ 167 ದಿನಾಂಕ: 01-02-2007ರಂದು ತಿಳಿಸಿದ್ದು ಈವರೆಗೂ ಯಾವುದೇ ಕ್ರಮ ಕೈಗೊಳ್ಳದಿರುವುದು ಸರಕಾರದ ಗಮನದಲ್ಲಿದೆಯೇ ;

ಈ) ಹಾಗಿದ್ದಲ್ಲಿ, ಶಾಶ್ವತ ಆಯೋಗವನ್ನು ರಚಿಸಿ ಅಧ್ಯಕ್ಷರು, ಸದಸ್ಯರನ್ನು ನೇಮಕ ಮಾಡಿ ಸಮೀಕ್ಷಾ ಕಾರ್ಯವನ್ನು ಪಡೆದು ವರದಿಯನ್ವಯ ಮುಂದಿನ ಕ್ರಮವನ್ನು ತೆಗೆದುಕೊಳ್ಳಲು ಸರಕಾರ ಯಾವ ಕ್ರಮ ಕೈಗೊಳ್ಳುತ್ತದೆ ?

ಶ್ರೀ ಬಾಲಚಂದ್ರ ಲ. ಜಾರಕಿಹೊಳಿ (ಸಮಾಜ ಕಲ್ಯಾಣ ಸಚಿವರು) :-

ಅ) ನ್ಯಾಯಮೂರ್ತಿ ಶ್ರೀ ಎ.ಜೆ. ಸದಾಶಿವ ವಿಚಾರಣಾ ಆಯೋಗದ ವರದಿಯು ಇನ್ನೂ ಸ್ವೀಕೃತವಾಗಿರುವುದಿಲ್ಲ. ಆದ್ದರಿಂದ, ಈ ಹಂತದಲ್ಲಿ ಮುಂದಿನ ಕ್ರಮ ಜರುಗಿಸುವ ಪ್ರಶ್ನೆ ಉದ್ಭವಿಸುವುದಿಲ್ಲ.

ಆ) ವರದಿಯನ್ನು ನೀಡಲು ದಿನಾಂಕ : 23-09-2007ರ ವರೆಗೆ ಕಾಲಾವಕಾಶವಿದ್ದು, ಸರ್ಕಾರಕ್ಕೆ ವರದಿ ಸಲ್ಲಿಸಲ್ಪಟ್ಟ ನಂತರ ಮುಂದಿನ ಕ್ರಮ ಕೈಗೊಳ್ಳಲಾಗುವುದು.

ಇ) ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಆಯೋಗಕ್ಕೆ ಅಧ್ಯಕ್ಷರು ಹಾಗೂ ಓರ್ವ ಸದಸ್ಯರನ್ನು ನೇಮಿಸಿ ದಿನಾಂಕ : 10-07-07 ರಂದು ಅಧಿಸೂಚನೆಯನ್ನು ಹೊರಡಿಸಿದ್ದು, ಅವರುಗಳು ಕಾರ್ಯಭಾರವನ್ನು ವಹಿಸಿಕೊಂಡಿದ್ದಾರೆ.

ಈ) ಪೂರ್ಣ ಪ್ರಮಾಣದಲ್ಲಿ ಆಯೋಗದ ಪುನರ್ ರಚನೆ ಮಾಡಿದ ನಂತರ ಮನೆ ಮನೆ ಸಮೀಕ್ಷಾ ಕಾರ್ಯ ಕುರಿತು ಸೂಕ್ತ ಕ್ರಮವನ್ನು ಆಯೋಗ ತೆಗೆದುಕೊಳ್ಳುವುದು. ಸರ್ಕಾರಕ್ಕೆ ವರದಿ ಸಲ್ಲಿಸಿದ ನಂತರ ಮುಂದಿನ ಕ್ರಮ ಕೈಗೊಳ್ಳಲಾಗುವುದು.

682 (460) ಶ್ರೀ ಸೋಮಣ್ಣ ವಿ. (ಬಿನ್ನಿಪೇಟೆ) :- ವೈದ್ಯಕೀಯ ಶಿಕ್ಷಣ ಸಚಿವರು ದಯೆಯಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೇ ?

ಅ) 2006-07ರಲ್ಲಿ ಹೊಸದಾಗಿ ಸರ್ಕಾರಿ ವೈದ್ಯಕೀಯ ಕಾಲೇಜುಗಳನ್ನು ಎಲ್ಲೆಲ್ಲಿ ಪ್ರಾರಂಭಿಸಲಾಯಿತು ;

ಆ) ಇದರಿಂದ ಎಷ್ಟು ವಿದ್ಯಾರ್ಥಿಗಳಿಗೆ ಪ್ರವೇಶಾವಕಾಶ ಸಿಕ್ಕಲು ಅವಕಾಶವಾಯಿತು ;

ಇ) 2007-08ರಲ್ಲಿ ಹೊಸ ಸರ್ಕಾರಿ ವೈದ್ಯಕೀಯ ಕಾಲೇಜುಗಳನ್ನು ಪ್ರಾರಂಭಿಸುವುದಕ್ಕಾಗಿ, ಎಂ.ಸಿ.ಐ. ಹಾಗೂ ಕೇಂದ್ರ ಸರ್ಕಾರದ ಅನುಮತಿ ಪಡೆಯಲು ಸರ್ಕಾರ ಕೈಗೊಂಡ ಕ್ರಮಗಳೇನು ?